# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರವರ ಕಛೇರಿ, ಕೆಂಪೇಗೌಡನಗರ ಉಪವಿಭಾಗ

ಚಿಕ್ಕಪೇಟೆ ವಿಭಾಗ, ಬೆಂಗಳೂರು.

ಸ.ಕಾ.ನಿ.ಅ(ಕೆ.ಗೌ.ನ)/ಪಿ.ಆರ್/ 120 /2022-23 ದಿನಾಂಕ : 7/6/2022

ದಿನಾಂಕ: 04-06-2022 ರಂದು ಈ ಉಪವಿಭಾಗದ ವಾರ್ಡ್ ಸಂಖ್ಯೆ: 143ರ ವಾರ್ಡ್ ಕಛೇರಿಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡಾವಳಿಗಳು ಈ ಕೆಳಕಂಡಂತಿರುತ್ತದೆ.

**ಉಪಸ್ಥಿತರು:**

| ಕ್ರ ಸಂ. | ಹೆಸರು | ಹುದ್ದೆ | ಮೊಬೈಲ್ ಸಂಖ್ಯೆ |
|---|---|---|---|
| 1 | ಶ್ರೀ. ಉಮಾಶಂಕರ್ | ನೋಡಲ್ ಅಧಿಕಾರಿಗಳು ಹಾಗೂ ಉಪನಿರ್ದೇಶಕರು ನಗರ ಯೋಜನೆ (ದಕ್ಷಿಣ) | 9480684418 |
| 2 | ಶ್ರೀ. ಸಿ.ಲಿಂಗರಾಜೇಗೌಡ | ಕಾರ್ಯದರ್ಶಿ ಹಾಗೂ ಕಿರಿಯ ಅಭಿಯಂತರರು ವಾರ್ಡ್ ಸಂಖ್ಯೆ:143 | 9480688143 |
| 3 | ಬಸವನಗುಡಿ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 8217636732 |
| 4 | ಶ್ರೀ.ರಾಮಯ್ಯಂಗಾರ್ ರಸ್ತೆ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 9901066586 |
| 5 | ವಿ.ವಿ.ಪುರಂ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | |
| 6 | ಎಂ.ಎಂ.ವಿ ರಸ್ತೆ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 9448387878 |
| 7 | ಚಿಕ್ಕಣ್ಣ ಗಾರ್ಡನ್ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 9448508638 |
| 8 | ಶ್ರೀ. ರಾಜೇಶ್.ಎಂ.ಎಸ್ | ಸಹಾಯಕ ಪೊಲೀಸ್ ಸಭ್ ಇನ್ಸ್‌ಪೆಕ್ಟರ್ ಶಂಕರಪುರಂ ಪೊಲೀಸ್ ಠಾಣೆ | 9901053590 |
| 9 | ಶ್ರೀ.ಟಿ.ಆಂಜನೇಯ | ಹಿರಿಯ ಆರೋಗ್ಯ ಪರಿವೀಕ್ಷಕರು | |
| 10 | ಶ್ರೀ.ಬಿ.ಮಲ್ಲಿಕಾರ್ಜುನಗೌಡ | ಜಲಪರಿವೀಕ್ಷಕರು ಎಂ.ಎನ್.ಕೆ.ಸೇವಾ ಠಾಣೆ (SW-3) ಬಸವನಗುಡಿ | 9900470445 |
| 11 | ಶ್ರೀ.ವಿ. ಸುರೇಶ್ | ಎ.ಎಸ್.ಐ, ವಿ.ವಿ.ಪುರಂ ಸಂಚಾರ ಪೊಲೀಸ್ ಠಾಣೆ | 9738272397 |

ಪು.ತಿ.ನೋ

Scanned with CamScanner

| | | | |
|---|---|---|---|
| 12 | ಶ್ರೀ.ಮಧುಸೂದನ್ ಬಿ.ಜಿ | ಎಂ.ವಿ.ಲೈನ್ ಪಾರ್ವತಿಪುರ ಬೆಂಗಳೂರು (ಸ್ಥಳೀಯರು) | 9740858490 |
| 13 | ರಾಮಲಿಂಗ | ಅಟ್ಟಿಮಾರಮ್ಮ ದೇವಸ್ಥಾನ ಪಾರ್ವತಿಪುರಂ (ಸ್ಥಳೀಯರು) | 9964561563 |

ದಿನಾಂಕ 04-06-2022 ರಂದು ನಡೆದ ವಾರ್ಡ್ -143 ರ ಸಮಿತಿ ಸಭೆಯ ನಡಾವಳಿಗಳು:

ಮಾನ್ಯ ನೋಡಲ್ ಅಧಿಕಾರಿಗಳು ಹಾಗೂ ಅಧ್ಯಕ್ಷರು ರವರ ಅನುಮತಿಯೊಂದಿಗೆ ಕಾರ್ಯದರ್ಶಿಗಳು ಹಾಗೂ ಸಹಾಯಕ ಅಭಿಯಂತರರು ಸಭೆಯಲ್ಲಿ ಹಾಜರಿದ್ದ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್‌ಗಳ ಅಧ್ಯಕ್ಷರು ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳನ್ನು ಸ್ವಾಗತಿಸುವ ಮೂಲಕ ಸಮಿತಿ ಸಭೆಯನ್ನು ಪ್ರಾರಂಭಿಸಲಾಯಿತು.

ಮೊದಲಿಗೆ ಬಸವನಗುಡಿ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೋಷನ್‌ನ ಶ್ರೀ.ರಾಜು ರವರು ಮಾತನಾಡಿ ಎಂ.ಎನ್.ಕೃಷ್ಣರಾವ್ ರಸ್ತೆಯ ಪಾದಚಾರಿ ಮಾರ್ಗದಲ್ಲಿ ಬೊಲ್ಯಾರ್ಡ್‌ಗಳನ್ನು ಅಳವಡಿಸುವ ಕಾಮಗಾರಿಯು ಪ್ರಾರಂಭವಾಗಿದ್ದು, ಈ ವಿಷಯವನ್ನು ಸಭೆಯ ಗಮನಕ್ಕೆ ತಂದಿ ಸಂತಸ ವ್ಯಕ್ತಪಡಿಸಿದರು. ಮತ್ತು ಈ ಕೆಳಕಂಡ ಅಂಶಗಳ ಬಗ್ಗೆ ಸೂಕ್ತ ಕ್ರಮಕೈಗೊಳ್ಳುವಂತೆ ಕೋರಿದರು. ಅವುಗಳೆಂದರೆ:-

1. ವಾರ್ಡ್‌ನಲ್ಲಿ ಸಿ.ಸಿ.ಟಿ.ವಿ ಕ್ಯಾಮರಾಗಳನ್ನು ಹಾಕುವುದು ಪೊಲೀಸ್ ಇಲಾಖೆಯದ್ದೊ ಅಥವಾ ಬಿಬಿಎಂಪಿ ಯದ್ದೊ ಎಂದು ತಿಳಿಸುವುದು.
2. ಆರ್.ವಿ.ರಸ್ತೆಯ ಟೀಚರ್ಸ್ ಕಾಲೇಜ್ ಬಳಿ ಬಸ್ ಶೆಲ್ಟರ್ ಅನ್ನು ನಿರ್ಮಿಸುವುದು.
3. ಶ್ರೀರಾಮ ಮಂದಿರ ರಸ್ತೆಯ ಕನರ್‌ವೆನ್ಸಿಯಲ್ಲಿರುವ ಹಸುವಿನ ಶೆಡ್ ಅನ್ನು ತೆರವುಗೊಳಿಸುವುದು.
4. ಸರ್ವೆಯರ್ ರಸ್ತೆ ಕನ್ಸರ್‌ವೆನ್ಸಿಯಲ್ಲಿರುವ "ನಾನ್‌ವೆಜ್" ಹೋಟೆಲ್ ನ್ನು ತೆರವುಗೊಳಿಸುವುದು.
5. ಕೆ.ಆರ್. ಪಾದಚಾರಿ ಮಾರ್ಗದಲ್ಲಿರುವ ನರ್ಸರಿಯನ್ನು ತೆರವುಗೊಳಿಸುವುದು.
6. ಪೌರಕಾರ್ಮಿಕರು ತಳ್ಳುಯವ ಗಾಡಿಗಳನ್ನು ಉಪಯೋಗಿಸ ಬಹುದಾ ಅಥವಾ ಇಲ್ಲಿವಾ ಎಂಬ ವಿಚಾರವನ್ನು ತಿಳಿಸುವುದು.
7. ಕನಕಪುರ ರಸ್ತೆಯಲ್ಲಿರುವ ಬ್ಯಾಹ್ಮಿನ್ಸ್ ಹೋಟೆಲ್‌ನವರು ಪಾದಚಾರಿ ಮಾರ್ಗದಲ್ಲಿ ಹಾಕಿರುವ ಟೇಬಲ್‌ಗಳನ್ನು ತೆರವುಗೊಳಿಸುವುದು.

ಈ ವ ಎಲ್ಲಾ ವಿಷಯಗಳ ಬಗ್ಗೆ ಸಭೆಯಲ್ಲಿ ಚರ್ಚಿಸಿ ಸೂಕ್ತ ಕ್ರಮ ಕೈಗೊಳ್ಳುವಂತೆ ಹಾಜರಿದ್ದ ಹಿರಿಯ ಆರೋಗ್ಯ ಪರಿವೀಕ್ಷಕರು ಮತ್ತು ವಾರ್ಡ್ ಸಹಾಯಕ ಅಭಿಯಂತರರಿಗೆ ಮಾನ್ಯ ನೋಡಲ್ ಅಧಿಕಾರಿಗಳು ಸೂಚಿಸಿದರು.

ಪು.ತಿ.ನೋ

Scanned with CamScanner

ನಂತರದಲ್ಲಿ ರಾಮಯ್ಯಂಗಾರ್ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೋಷನ್‌ನ ಶ್ರೀ.ಓ.ವಿ.ಜಯಕುಮಾರ್ ರವರು ಮಾತನಾಡಿ ಕೆಲವು ವಿಷಯಗಳನ್ನು ಸಭೆಯಲ್ಲಿ ಪ್ರಾಸ್ತಾಪಿಸಿ ಇವುಗಳ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳುವಂತೆ ಕೋರಿದರು. ಅವುಗಳೆಂದರೆ:

1. ಹಸಿಕಸಿ ಮತ್ತು ಒಣಕಸವನ್ನು ವಿಂಗಡಿಸಿ ಪಡೆಯುವ ಕೆಲಸವು ಸಮರ್ಪಕವಾಗಿ ಆಗುತ್ತಿರುವುದಿಲ್ಲ ಹಾಗೂ ಸಾರ್ವಜನಿಕರಿಗೆ ಜಾಗೃತಿ ಮೂಡಿಸುವ ಕೆಲಸವನ್ನು ಮಾಡುವುದು.
2. ಐಲ್ಯಾಂಡ್‌ಗಳ ಬಳಿ ಪಾರಿವಾಳಗಳಿಗೆ ಆಹಾರ ಧಾನ್ಯಗಳನ್ನು ಹಾಕುವುದನ್ನು ತಡೆಯುವುದು.
3. ಬೀಡಾಡಿ ಹಸುಗಳ ಹಾವಳಿಯನ್ನು ತಪ್ಪಿಸುವುದು ಮತ್ತು ಹಸುಗಳ ಸಗಣಿಯನ್ನು ಸಮರ್ಪಕವಾಗಿ ವಿಲೇವಾರಿ ಮಾಡುವುದು.

ತಿಳಿಸಿರುವ ಎಲ್ಲಾ ವಿಷಯಗಳ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳುವಂತೆ ಮಾನ್ಯ ನೋಡಲ್ ಅಧಿಕಾರಿಗಳು ಕಿರಿಯ ಆರೋಗ್ಯ ಪರಿವೀಕ್ಷಕರು ಮತ್ತು ಪಶುಸಂಗೋಪನಾ ಇಲಾಖೆ ಅಧಿಕಾರಿಗಳನ್ನು ಸಂಪರ್ಕಿಸುವಂತೆ ವಾರ್ಡ್ ಅಭಿಯಂತರರಿಗೆ ಸೂಚಿಸಿದರು.

ಈ ಎಲ್ಲಾ ವಿಷಯಗಳ ಬಗ್ಗೆ ಮಾನ್ಯ ನೋಡಲ್ ಅಧಿಕಾರಿಗಳು ಚರ್ಚಿಸಲಾಗಿ ಸಭೆಯಲ್ಲಿ ಹಾಜರಿದ್ದ ಹಿರಿಯ ಆರೋಗ್ಯ ಪರಿವೀಕ್ಷಕರು ಮಾರ್ಷಲ್ ಮತ್ತು ವಾರ್ಡ್‌ನ ಅಭಿಯಂತರರಿಗೆ ಸೂಕ್ತ ಕ್ರಮವನ್ನು ಕೈಗೊಳ್ಳುವಂತೆ ಸೂಚಿಸಿದರು.

ನಂತರ ವಾರ್ಡ್‌ನ ಅಭಿಯಂತರರು ಮಾತನಾಡಿ ಶಂಕರಪುರಂ ವ್ಯಾಪ್ತಿಯ ಚಂದ್ರಶೇಖರ್ ಭಾರತೀ ತೀರ್ಥ ರಸ್ತೆಯಲ್ಲಿ ಹಾಗೂ ಜ್ಞಾನೋದಯ ಶಾಲೆಯ ಮುಂಭಾಗದ ರಸ್ತೆಯಲ್ಲಿ ಒಳಚರಂಡಿ ಕೊಳವೆಗಳನ್ನು ಅಳವಡಿಸಲು ರಸ್ತೆ ಅಗೆದ ಹಾಳಾಗಿದ್ದು, ವಾಹನ ಸಂಚಾರಕ್ಕೆ ಹಾಗೂ ಸಾರ್ವಜನಿಕ ಓಡಾಟಕ್ಕೆ ತುಂಬಾ ತೊಂದರೆಯಾಗುತ್ತಿರುವುದನ್ನು ಸಭೆಯ ಗಮನಕ್ಕೆ ತಂದರು. ಈ ವಿಷಯವಾಗಿ ಬಿ.ಡಬ್ಲ್ಯೂ.ಎಸ್.ಎಸ್.ಬಿ ನ ಅಭಿಯಂತರರಾದ ಶ್ರೀ. ಪ್ರಹ್ಲಾದ್ ರವರಿಗೆ ದೂರವಾಣಿ ಮುಖಾಂತರ ಸಂಪರ್ಕಿಸಿ ಸೂಕ್ತ ಕ್ರಮ ಕೈಗೊಳ್ಳುವಂತೆ ಮಾನ್ಯ ನೋಡಲ್ ಅಧಿಕಾರಿಗಳು ಸೂಚಿಸಿದರು.

ನಂತರ ಸಭೆಗೆ ಬಂದಿದ್ದ ಸಾರ್ವಜನಿಕರಾದ ಶ್ರೀ.ಮಧುಸೂದನ್ ಮತ್ತು ರಾಮಲಿಂಗ ರವರು ಮಾತನಾಡಿ ಪಾರ್ವತಿಪುರಂ ನ 1ನೇ ಮುಖ್ಯರಸ್ತೆ ರಸ್ತೆ ಹಾಕಿರುವ ಬೋರ್‌ವೆಲ್ ಮತ್ತು ಮಾಗಡಿ ವೆಂಕಟಪ್ಪ ರಸ್ತೆಯಲ್ಲಿ ಪೈಪ್ ಲೇನ್ ಹಾಳಾಗಿದ್ದು ದುರಸ್ಥಿ ಪಡಿಸಿಕೊಡುವಂತೆ ಕೋರಿದರು. ಈ ವಿಷಯಕ್ಕೆ ಸಂಬಂಧಿಸಿದಂತೆ ಸೂಕ್ತ ಕ್ರಮ ಕೈಗೊಳ್ಳುವಂತೆ ಮಾನ್ಯ ನೋಡಲ್ ಅಧಿಕಾರಿಗಳು ವಾರ್ಡ್‌ನ ಅಭಿಯಂತರರಿಗೆ ಸೂಚಿಸಿದರು ಪುನಃ ಮಾತು ಮುಂದುವರೆಸಿದ ಸಾರ್ವಜನಿಕರು ಪಾರ್ವತಿಪುರಂನ ಗಲ್ಲಿಗಳಲ್ಲಿ ರಸ್ತೆ ಅಭಿವೃದ್ಧಿ ಹಾಗೂ ಚರಂಡಿ ಅಭಿವೃದ್ಧಿ

ಮು.ತಿ.ನೋ

Scanned with CamScanner

ಕಾಮಗಾರಿಗಳು ಪ್ರಗತಿಯಲ್ಲಿರುವುದರಿಂದ ಸ್ಥಳೀಯ ನಿವಾಸಿಗಳ ವಾಹನಗಳನ್ನು ಸಜ್ಜನರಾವ್ ರಸ್ತೆಯಲ್ಲಿ ನಿಲ್ಲಿಸುತ್ತಿರುವುದರಿಂದ ಸಂಚಾರಿ ಪೋಲಿಸರು ಫೋಟೋಗಳನ್ನು ತೆಗೆದು ದಂಡ ಹಾಕುತ್ತಿರುವುದಾಗಿ ಸಭೆಗೆ ತಿಳಿಸಿದರು. ಈ ಬಗ್ಗೆ ಪರಿಶೀಲಿಸಿ ಕ್ರಮ ಕೈಗೊಳ್ಳುವಂತೆ ಸಭೆಯಲ್ಲಿ ಹಾಜರಿದ್ದ ಸಂಚಾರಿ ವಿಭಾಗದ ಅಧಿಕಾರಿಗಳಿಗೆ ಮಾನ್ಯ ನೋಡಲ್ ಅಧಿಕಾರಿಗಳು ಸೂಚಿಸಿದರು.

ನಂತರ ಕಾರ್ಯದರ್ಶಿಗಳ ವಂದನಾರ್ಪಣೆಯೊಂದಿಗೆ ವಾರ್ಡ್ ಸಮಿತಿ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಕಾರ್ಯದರ್ಶಿಗಳು ಹಾಗೂ
ಸಹಾಯಕ ಅಭಿಯಂತರರು
ವಾರ್ಡ್ -143 ವಿ. ವಿ.ಪುರಂ

ನೋಡಲ್ ಅಧಿಕಾರಿಗಳು
ವಾರ್ಡ್ ಸಂಖ್ಯೆ: 143 ಹಾಗೂ
ಉಪನಿರ್ದೇಶಕರು ನಗರ ಯೋಜನೆ (ದಕ್ಷಿಣ)

Scanned with CamScanner